# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 01. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1033 |
| 02. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ರಘುನಾಥ್ ರಾವ್ ಮಲ್ಕಾಪೂರೆ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| 03. | ಉತ್ತರಿಸುವ ದಿನಾಂಕ | : | 21-09-2021 |
| 04. | ಉತ್ತರಿಸುವ ಸಚಿವರು. | : | ಮಾನ್ಯ ಗೃಹ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಶಿಶುಗಳ ಕಳ್ಳಸಾಗಾಣೆ ಮತ್ತು ಮಾರಾಟ ಜಾಲ ಸಕ್ರಿಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳೆದ 3 ವರ್ಷದಿಂದ ಎಷ್ಟು ಪ್ರಕರಣಗಳು ದಾಖಲಾಗಿವೆ; (ಜಿಲ್ಲಾವಾರು ಸ್ಪಷ್ಟ ಮಾಹಿತಿ ನೀಡುವುದು) | ಬಂದಿರುತ್ತದೆ.<br>ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಶಿಶುಗಳ ಕಳ್ಳ ಸಾಗಾಣೆ, ಮಾರಾಟ ಮಾಡಲಾಗಿರುವ ಶಿಶುಗಳು ಮತ್ತು ಮಾರಾಟ ಮಾಡಲ್ಪಟ್ಟ ಶಿಶುಗಳ ಪೈಕಿ ರಕ್ಷಿಸಲಾಗಿರುವ ಶಿಶುಗಳ ಸಂಖ್ಯೆಗಳ ಅಂಕಿ ಅಂಶಗಳ ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಆ | ಈ ಪ್ರಕರಣಗಳಲ್ಲಿ ಒಟ್ಟು ಎಷ್ಟು ಶಿಶುಗಳನ್ನು ಮಾರಾಟ ಮಾಡಲಾಗಿದೆ ; ಮಾರಾಟ ಮಾಡಲ್ಪಟ್ಟ ಎಷ್ಟು ಶಿಶುಗಳನ್ನು ರಕ್ಷಿಸಲಾಗಿದೆ ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು) | |
| ಇ | ಈ ಜಾಲದ ರುವಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಒಟ್ಟು ಎಷ್ಟು ಜನರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ಮಾಹಿತಿ ನೀಡುವುದು) | ಶಿಶು ಮಾರಾಟದಲ್ಲಿ ತೊಡಗಿರುವವರ ವಿರುದ್ಧ ಕಾನೂನು ರೀತ್ಯಾ ಪ್ರಕರಣಗಳನ್ನು ದಾಖಲಿಸಲಾಗಿದೆ.<br>ಸದರಿ ಪ್ರಕರಣಗಳಲ್ಲಿ ಬಂಧಿಸಲಾಗಿರುವ ಆರೋಪಿಗಳ ಸಂಖ್ಯೆಯು ಈ ಕೆಳಕಂಡಂತಿದೆ.<br>ವರ್ಷ: 2018 / 2019 / 2020 / 2021(ಆಗಸ್ಟ್)<br>ಬಂಧಿಸಲಾಗಿರುವ ಆರೋಪಿಗಳ ಸಂಖ್ಯೆ: 29 / 17 / 36 / 46 |
| ಈ | ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಶಿಶುಗಳ ಮಾರಾಟ ಪ್ರಕರಣಗಳನ್ನು ತಡೆಯಲು ಕೈಗೊಂಡಿರುವ ಮಹತ್ವದ ಕ್ರಮಗಳೇನು ; ಹಾಕಿಕೊಂಡಿರುವ ಕಾರ್ಯಕ್ರಮಗಳೇನು ? | <u>ಶಿಶು ಮಾರಾಟ ಪ್ರಕರಣಗಳನ್ನು/ಅಕ್ರಮ ಮಾನವ ಕಳ್ಳಸಾಗಾಣಿಕೆಯನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.</u><br>➢ ಸರ್ಕಾರವು ಮಾನವ ಕಳ್ಳಸಾಗಣಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ 2019-20ನೇ ಸಾಲಿನಲ್ಲಿ ರೂ 3.88 ಕೋಟಿ ಅನುದಾನವನ್ನು ನಿರ್ಭಯ ಯೋಜನೆ ಅಡಿಯಲ್ಲಿ ಬಿಡುಗಡೆ ಮಾಡಿದ್ದು, ಸದರಿ ಅನುದಾನದಲ್ಲಿ ರಾಜ್ಯದ 30 ಮಹಿಳಾ ಪೊಲೀಸ್ ಠಾಣೆಗಳಲ್ಲಿ ಮಾನವ ಕಳ್ಳಸಾಗಾಣಿಕೆ ನಿಷೇಧ ಘಟಕಗಳನ್ನು ಸ್ಥಾಪಿಸಲಾಗಿದೆ. |

| | | |
|---|---|---|
| | | 2020-21ನೇ ಸಾಲಿಗೆ ರೂ 37.90 ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ಸದರಿ ಅನುದಾನದಲ್ಲಿ 5 ಮಹಿಳಾ ಪೊಲೀಸ್ ಠಾಣೆಗಳಲ್ಲಿ ಮಾನವ ಕಳ್ಳಸಾಗಣಿಕೆ ನಿಷೇಧ ಘಟಕಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಪ್ರತಿ ಮಾನವ ಕಳ್ಳಸಾಗಾಣಿಕೆ ಘಟಕಗಳಿಗೆ ಹಿರಿಯ ಮತ್ತು ಕಿರಿಯ ಮಕ್ಕಳ ಕಲ್ಯಾಣಾಧಿಕಾರಿಗಳನ್ನು ನಿಯೋಜಿಸಿ, ಅವರುಗಳಿಗೆ ತರಬೇತಿ ನೀಡಲಾಗಿರುತ್ತದೆ.<br>➢ ಮಾನವ ಸಾಗಣಿಕೆ ಮಾಡುವವರ ವಿರುದ್ಧ ಬಾತ್ಮಿ ಸಂಗ್ರಹಿಸಿ ತಪ್ಪಿತಸ್ಥರ ವಿರುದ್ಧ ಕಲಂ.370, 370[ಎ] ಐಪಿಸಿ ಮತ್ತು ಇಮ್‌ಮೋರಲ್ ಟ್ರಾಫಿಕಿಂಗ್ ಪ್ರಿವೆನ್‌ಷನ್ ಆಕ್ಟ್ (ಐ.ಟಿ.ಪಿ.ಎ) ಹಾಗೂ ಸಂಬಂಧಪಟ್ಟ ಇತರೆ ಕಾಯ್ದೆ ಮತ್ತು ಕಲಂ ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಮಾನವ ಕಳ್ಳಸಾಗಾಣಿಕೆಯ ಪ್ರಕರಣಗಳ ತನಿಖೆಯನ್ನು ಸಮರ್ಥವಾಗಿ ನಿರ್ವಹಿಸಲು ತನಿಖಾಧಿಕಾರಿಗಳಿಗಾಗಿ ನಿರ್ಧಿಷ್ಟ ಕಾರ್ಯವಿಧಾನವನ್ನು ಸಿದ್ದಪಡಿಸಿ, ಸ್ಥಾನಿ ಆದೇಶದ ಮೂಲಕ ರಾಜ್ಯದ ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಿಕೊಡಲಾಗಿದೆ.<br>➢ ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ ಮಹಿಳೆಯರಿಗೆ & ಮಕ್ಕಳಿಗೆ ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.<br>➢ ಅಪರಾಧ ಚಟುವಟಿಕೆಗಳಲ್ಲಿ ಹಾಗೂ ಮಕ್ಕಳ ಭಿಕ್ಷಾಟನೆಯಲ್ಲಿ ತೊಡಗಿಸಿರುವಂತಹ ಅಪರಿಚಿತ ವ್ಯಕ್ತಿಗಳು ಕಂಡು ಬಂದಲ್ಲಿ ಠಾಣೆಗೆ ಮಾಹಿತಿ ನೀಡುವಂತೆ ಸೂಚಿಸಲಾಗಿರುತ್ತದೆ.<br>➢ ಮಹಿಳೆ ಮತ್ತು ಮಕ್ಕಳ ಸುರಕ್ಷತೆಗಾಗಿ ವಿವಿಧ ಹೆಸರುಗಳಡಿಯಲ್ಲಿ ವಿಶೇಷ ಪಡೆಗಳನ್ನು ರಚಿಸಿದ್ದು, ಸದರಿ ಪಡೆಯು ನಗರದ ಮತ್ತು ಜಿಲ್ಲಾ ವ್ಯಾಪ್ತಿಯ ಶಾಲಾ- ಕಾಲೇಜು, ಪಾರ್ಕ್‌ಗಳು, ಹಾಸ್ಟೆಲ್, ಪಿಜಿ, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ಇತರೆ ಹೆಚ್ಚಾಗಿ ಮಹಿಳೆಯರು ಮತ್ತು ಮಕ್ಕಳು ಓಡಾಡುವ ಸ್ಥಳಗಳಲ್ಲಿ ಪ್ರತಿದಿನ ಗಸ್ತು ಮಾಡುತ್ತಾ ಅರಿವು ಮೂಡಿಸಲಾಗುತ್ತಿದೆ.<br>➢ ಬಸ್ ನಿಲ್ದಾಣ, ರೈಲು ನಿಲ್ದಾಣ, ವಿಮಾಣ ನಿಲ್ದಾಣ ಮತ್ತು ಜನನಿಬಿಡ ಸ್ಥಳಗಳಲ್ಲಿ ಹಾಗೂ ಪ್ರಮುಖ ಸ್ಥಳಗಳನ್ನು ಗುರುತಿಸಿ ಸಿಸಿ ಟಿ.ವಿ ಕ್ಯಾಮರಾಗಳನ್ನು ಅಳವಡಿಸಿದ್ದು ಅವುಗಳ ಸಹಾಯದಿಂದ ಮಹಿಳೆಯರ |

| | | |
|---|---|---|
| | | ಮತ್ತು ಮಕ್ಕಳ ಸಾಗಾಟ ಮಾಡುವವರ ಮೇಲೆ ನಿಗಾವಹಿಸಲಾಗಿದೆ.<br>➢ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿನ ಬೀಟ್ ಸಿಬ್ಬಂದಿಗಳ ಮೂಲಕ ಹಾಗೂ ಬೀಟ್ ಗ್ರೂಪ್ ಸದಸ್ಯರ ಮೂಲಕ ಮಾನವ ಕಳ್ಳಸಾಗಾಣಿಕೆಗೆ ಸಂಬಂಧಿಸಿದಂತೆ ಮುಂಚಿತವಾಗಿ ಮಾಹಿತಿ ಸಂಗ್ರಹಿಸಿ ಸೂಕ್ತ ಮುಂಜಾಗ್ರತಾ ಕ್ರಮ ಕೈಕೊಳ್ಳುವ ವ್ಯವಸ್ಥೆ ಮಾಡಲಾಗಿದೆ.<br>➢ ಚಾಲ್ತಿಯಲ್ಲಿರುವ ಸಾಮಾಜಿಕ ಜಾಲತಾಣಗಳಾದ ಬ್ಲಾಗ್, ಟ್ವಿಟರ್, ಫೇಸ್ ಬುಕ್, ಪೊಲೀಸ್ ವೆಬ್ ಸೈಟ್ ಹಾಗೂ ಇತರೆ ಜಾಲತಾಣಗಳ ಮೂಲಕ ಮಾನವ ಕಳ್ಳ ಸಾಗಾಣೆ ಬಗ್ಗೆ ಜಾಗೃತಿ ಮೂಡಿಸುವ ಸಂದೇಶವನ್ನು ಪ್ರಕಟಿಸಲಾಗಿದೆ. |

**ಕಡತ ಸಂಖ್ಯೆ : ಹೆಚ್‌ಡಿ 26 ಪಿಸಿಕ್ಯೂ 2021**

(ಆರಗ ಜ್ಞಾನೇಂದ್ರ)
ಗೃಹ ಸಚಿವರು

# ಅನುಬಂಧ

| ಜಿಲ್ಲೆ/ನಗರ | ಶಿಶುಗಳ ಕಳ್ಳಸಾಗಾಣಿಕೆ/ ಮಾರಾಟ ಜಾಲಕ್ಕೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳ ಸಂಖ್ಯೆ | | | | ಕಳ್ಳಸಾಗಾಣಿಕೆ/ ಮಾರಾಟವಾದ ಶಿಶುಗಳ ಸಂಖ್ಯೆ | | | | ಕಳ್ಳಸಾಗಾಣಿಕೆ/ ಮಾರಾಟದ ನಂತರ ರಕ್ಷಿಸಲ್ಪಟ್ಟ ಶಿಶುಗಳ ಸಂಖ್ಯೆ | | | | ಬಂಧನಕ್ಕೊಳಗಾದ ಆರೋಪಿಗಳ ಸಂಖ್ಯೆ | | | |
|---|---|---|---|---|---|---|---|---|---|---|---|---|---|---|---|---|
| | 2018 | 2019 | 2020 | 2021 (ಆಗಸ್ಟ್) | 2018 | 2019 | 2020 | 2021 (ಆಗಸ್ಟ್) | 2018 | 2019 | 2020 | 2021 (ಆಗಸ್ಟ್) | 2018 | 2019 | 2020 | 2021 (ಆಗಸ್ಟ್) |
| ಬಾಗಲಕೋಟೆ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಬಳ್ಳಾರಿ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಬೆಳಗಾವಿ ನಗರ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಬೆಳಗಾವಿ ಜಿಲ್ಲೆ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಬೆಂಗಳೂರು ನಗರ | 1 | 1 | 3 | 3 | 1 | 1 | 3 | 8 | 1 | 1 | 3 | 4 | 2 | 6 | 7 | 9 |
| ಬೆಂಗಳೂರು ಜಿಲ್ಲೆ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಬೀದರ್ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಚಾಮರಾಜನಗರ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಚಿಕ್ಕಬಳ್ಳಾಪುರ | 0 | 0 | 0 | 1 | 0 | 0 | 0 | 1 | 0 | 0 | 0 | 1 | 0 | 0 | 0 | 4 |
| ಚಿಕ್ಕಮಗಳೂರು | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಚಿತ್ರದುರ್ಗ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ದಕ್ಷಿಣ ಕನ್ನಡ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ದಾವಣಗೆರೆ | 0 | 0 | 2 | 1 | 0 | 0 | 2 | 1 | 0 | 0 | 2 | 1 | 0 | 0 | 14 | 5 |
| ಧಾರವಾಡ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಗದಗ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಹಾಸನ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಹಾವೇರಿ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಹುಬ್ಬಳ್ಳಿ-ಧಾರವಾಡ ನಗರ | 0 | 1 | 0 | 1 | 0 | 1 | 0 | 1 | 0 | 1 | 0 | 1 | 0 | 4 | 0 | 10 |
| ಕೆ.ಜಿ.ಎಫ್. | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಕಲಬುರಗಿ ನಗರ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಕಲಬುರಗಿ ಜಿಲ್ಲೆ | 1 | 0 | 0 | 0 | 1 | 0 | 0 | 0 | 1 | 0 | 0 | 0 | 5 | 0 | 0 | 0 |
| ಕೊಡಗು | 0 | 0 | 1 | 0 | 0 | 0 | 1 | 0 | 0 | 0 | 1 | 0 | 0 | 0 | 5 | 0 |
| ಕೋಲಾರ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಕೊಪ್ಪಳ | 0 | 1 | 0 | 0 | 0 | 1 | 0 | 0 | 0 | 1 | 0 | 0 | 0 | 2 | 0 | 0 |
| ಮಂಡ್ಯ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಮಂಗಳೂರು ನಗರ | 0 | 0 | 1 | 2 | 0 | 0 | 1 | 2 | 0 | 0 | 0 | 2 | 0 | 0 | 0 | 3 |
| ಮೈಸೂರು ನಗರ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಮೈಸೂರು ಜಿಲ್ಲೆ | 0 | 0 | 0 | 2 | 0 | 0 | 0 | 3 | 0 | 0 | 0 | 3 | 0 | 0 | 0 | 3 |
| ರಾಯಚೂರು | 0 | 1 | 0 | 0 | 0 | 1 | 0 | 0 | 0 | 1 | 0 | 0 | 0 | 2 | 0 | 0 |
| ರಾಮನಗರ | 1 | 0 | 0 | 1 | 1 | 0 | 0 | 1 | 1 | 0 | 0 | 1 | 5 | 0 | 0 | 7 |
| ಶಿವಮೊಗ್ಗ | 4 | 1 | 2 | 2 | 4 | 1 | 2 | 2 | 4 | 1 | 2 | 2 | 13 | 3 | 10 | 2 |
| ತುಮಕೂರು | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಉಡುಪಿ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಉತ್ತರ ಕನ್ನಡ | 1 | 0 | 0 | 2 | 1 | 0 | 0 | 2 | 1 | 0 | 0 | 2 | 4 | 0 | 0 | 3 |
| ವಿಜಯಪುರ | 0 | 0 | 0 | 1 | 0 | 0 | 0 | 1 | 0 | 0 | 0 | 0 | 0 | 0 | 0 | 0 |
| ಯಾದಗಿರಿ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| ಕರ್ನಾಟಕ ರೈಲ್ವೇಸ್ | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 | 0 |
| Total | 8 | 5 | 9 | 16 | 8 | 5 | 9 | 22 | 8 | 5 | 8 | 17 | 29 | 17 | 36 | 46 |